ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಸಹ ಶಿಕ್ಷಕರ ಮತ್ತು ಉಪನ್ಯಾಸಕರ ಹುದ್ದೆ ಭರ್ತಿ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

1451 (1724) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅನುದಾನಿತ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ ಹಾಗೂ ಇನ್ನಿತರೆ ಕಾರಣಗಳಿಂದ ಖಾಲಿ ಇರುವ ಸಹ ಶಿಕ್ಷಕರ ಮತ್ತು ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಯಾವ ಅವಧಿಯಿಂದ ಸದರಿ ಹುದ್ದೆಗಳು ಖಾಲಿ ಇವೆ ;

(ಇ) ಸದರಿ ಹುದ್ದೆಗಳು ಖಾಲಿ ಇರುವುದರಿಂದ ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಅಡ್ಡಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸರ್ಕಾರ ಇದುವರೆಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಉ) ಯಾವ ಅವಧಿಯವರೆಗೆ ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ?